# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 364 (422) |
| ವಿಧಾನ ಪರಿಷತ್ ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 16.02.2023 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕೇಂದ್ರ ಪುರಸ್ಕೃತ ಯೋಜನೆಯಾದ ಅಮೃತ ಗ್ರಾಮ ಪಂಚಾಯತ್ ಯೋಜನೆಯಡಿಯಲ್ಲಿ ಪ್ರಥಮ ಹಂತದಲ್ಲಿ ಎಷ್ಟು ಗ್ರಾಮ ಪಂಚಾಯತಿಯನ್ನು ಅಭಿವೃದ್ಧಿ ಪಡಿಸಲಾಗಿದೆ. | ಅಮೃತ ಗ್ರಾಮ ಪಂಚಾಯತಿ ಯೋಜನೆಯಡಿಯಲ್ಲಿ ಪ್ರಥಮ ಹಂತದಲ್ಲಿ 750 ಗ್ರಾಮ ಪಂಚಾಯತಿಗಳನ್ನು ಅಭಿವೃದ್ಧಿ ಪಡಿಸಲಾಗಿದೆ. |
| ಆ. | ಈ ಯೋಜನೆಗೆ ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ಅನುದಾನ ನೀಡಿಕೆ ಕುರಿತಾದ ವಿವರಗಳನ್ನು ನೀಡುವುದು; | ಈ ಯೋಜನೆಗೆ ಕೇಂದ್ರ ಸರ್ಕಾರದಿಂದ ಯಾವುದೇ ಅನುದಾನ ಒದಗಿಸಿರುವುದಿಲ್ಲ.<br><br>2022-23ನೇ ಸಾಲಿನ ರಾಜ್ಯದ ಆಯವ್ಯಯದ ಘೋಷಣೆಯಲ್ಲಿ ಅಮೃತ ಗ್ರಾಮ ಪಂಚಾಯತ್ ಯೋಜನೆಯ (ಹಂತ-1) ರಡಿ ಆಯ್ಕೆಯಾದ 750 ಗ್ರಾಮ ಪಂಚಾಯತಿಗಳಿಗೆ ಒಟ್ಟು ರೂ. 185.625 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ. |
| ಇ | ಅಮೃತ ಗ್ರಾಮ ಪಂಚಾಯತ್ ಯೋಜನೆಯಡಿ ಗ್ರಾಮ ಪಂಚಾಯತಿಗಳ ಆಯ್ಕೆಗಳಿಗೆ ಇರುವ ಮಾನದಂಡಗಳೇನು? ರಾಜ್ಯದಲ್ಲಿ ಎಷ್ಟು ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿ ಅಭಿವೃದ್ಧಿ ಪಡಿಸಲು ಕ್ರಮ ಜರುಗಿಸಲಾಗಿದೆ? | ಅಮೃತ ಗ್ರಾಮ ಪಂಚಾಯತ್ ಯೋಜನೆಯಡಿ ಗ್ರಾಮ ಪಂಚಾಯತಿಗಳ ಆಯ್ಕೆಗಳಿಗೆ ಇರುವ ಮಾನದಂಡಗಳು ಕೆಳಕಂಡಂತಿವೆ:<br>1. 2500 ಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯಾಗಿರಬೇಕು<br>2. ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಜನಾಂಗದವರು ಹೆಚ್ಚಾಗಿ ವಾಸಿಸುವ ಗ್ರಾಮ ಪಂಚಾಯತಿಯಾಗಿರಬೇಕು<br>3. ಜಲಜೀವನ್ ಮಿಷನ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ಗ್ರಾಮ ಪಂಚಾಯತಿಯಾಗಿರಬೇಕು<br>4. ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ ಅಳವಡಿಸಲು ಕ್ರಮ ಕೈಗೊಂಡಿರುವ ಗ್ರಾಮ ಪಂಚಾಯತಿಯಾಗಿರಬೇಕು.<br><br>ರಾಜ್ಯದಲ್ಲಿ 750 ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿ ಅಭಿವೃದ್ಧಿಪಡಿಸಲು ಕ್ರಮ ಜರುಗಿಸಲಾಗಿದೆ. |

ಕಡತ ಸಂಖ್ಯೆ: ಗ್ರಾಅಪ/15ನೇವಿಸ/149ನೇಅ/ಚು.ರ.ಪ್ರಸಂ: 364(422)/2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ